Akashvani: Bangalore
National Bulletin In Kannada
06.03.2026 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
********

ಮುಖ್ಯಾಂಶಗಳು :

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಎರಡು ದಿನಗಳ ಕಾಲ ಪಶ್ಚಿಮ ಬಂಗಾಳಕ್ಕೆ ಭೇಟಿ

೨. ವಿವಿಧ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳಿಗೆ ರಾಜ್ಯಪಾಲರ ನೇಮಕ

೩. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತಕ್ಕೆ ಶಾಶ್ವತ ಸ್ಥಾನ ಕಲ್ಪಿಸುವಂತೆ ಫಿನ್‌ಲ್ಯಾಂಡ್ ಅಧ್ಯಕ್ಷರ ಒತ್ತಾಯ

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಇಂಗ್ಲೆಂಡ್ ವಿರುದ್ಧ ರೋಚಕ ಗೆಲುವು ಸಾಧಿಸಿ, ಫೈನಲ್‌ಗೆ ಲಗ್ಗೆ ಇಟ್ಟ ಭಾರತ

*********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಎರಡು ದಿನಗಳ ಕಾಲ ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಅಂಗವಾಗಿ ರಾಷ್ಟ್ರಪತಿಗಳು ಇಂದು ಡಾರ್ಜಿಲಿಂಗ್ ಬೆಟ್ಟ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ ಮತ್ತು ಡಾರ್ಜಿಲಿಂಗ್‌ನ ಲೋಕ ಭವನದಲ್ಲಿ ಸಾಂಸ್ಕೃತಿಕ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಐಐಟಿ ಖರಗ್‌ಪುರದಲ್ಲಿ ಮಹಿಳಾ ನಾಯಕತ್ವ ಮತ್ತು ಸಬಲೀಕರಣದ ಕುರಿತು 'ಪ್ಲಾಟಿನಂ ಜುಬಿಲಿ ಫ್ಲ್ಯಾಗ್‌ಶಿಪ್' ಕಾರ್ಯಕ್ರಮವನ್ನು ವರ್ಚುವಲ್ ಆಗಿ ಉದ್ಘಾಟಿಸಲಿದ್ದಾರೆ. ರಾಷ್ಟ್ರಪತಿಗಳು ನಾಳೆ ಡಾರ್ಜಿಲಿಂಗ್‌ನಲ್ಲಿ ಅಂತಾರಾಷ್ಟ್ರೀಯ ಸಂತಾಲ್ ಮಂಡಳಿ ಆಯೋಜಿಸುತ್ತಿರುವ ೯ನೇ ಅಂತಾರಾಷ್ಟ್ರೀಯ ಸಂತಾಲ್ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

*********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ರಾಜ್ಯಪಾಲರನ್ನು ನೇಮಿಸಿದ್ದಾರೆ. ಹಿಮಾಚಲ ಪ್ರದೇಶದ ರಾಜ್ಯಪಾಲ ಶಿವ ಪ್ರತಾಪ್ ಶುಕ್ಲಾ ಅವರನ್ನು ತೆಲಂಗಾಣ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ತೆಲಂಗಾಣ ರಾಜ್ಯಪಾಲ ಜಿಷ್ಣು ದೇವ್ ವರ್ಮಾ ಅವರನ್ನು ಮಹಾರಾಷ್ಟ್ರ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಬಿಹಾರದ ಮಾಜಿ ವಿಧಾನಸಭಾ ಸ್ಪೀಕರ್ ನಂದ ಕಿಶೋರ್ ಯಾದವ್ ಅವರನ್ನು ನಾಗಾಲ್ಯಾಂಡ್ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ನಿವೃತ್ತ ಲೆಫ್ಟಿನೆಂಟ್ ಜನರಲ್ ಸೈಯದ್ ಅತಾ ಹಸ್ನೈನ್ ಅವರನ್ನು ಬಿಹಾರದ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ತಮಿಳುನಾಡು ರಾಜ್ಯಪಾಲ ಆರ್.ಎನ್.ರವಿ ಅವರನ್ನು ಪಶ್ಚಿಮ ಬಂಗಾಳದ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಕೇರಳದ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರು ತಮಿಳುನಾಡು ರಾಜ್ಯಪಾಲರಾಗಿ ಕರ್ತವ್ಯ ನಿರ್ವಹಿಸಲಿದ್ದಾರೆ. ಪಶ್ಚಿಮ ಬಂಗಾಳದ ರಾಜ್ಯಪಾಲ ಡಾ. ಸಿ.ವಿ. ಆನಂದ ಬೋಸ್ ಅವರ ರಾಜೀನಾಮೆಯನ್ನು ರಾಷ್ಟ್ರಪತಿಗಳು ಅಂಗೀಕರಿಸಿದ್ದಾರೆ. ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್ ಕವಿಂದರ್ ಗುಪ್ತಾ ಅವರನ್ನು ಹಿಮಾಚಲ ಪ್ರದೇಶದ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ದೆಹಲಿಯ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ಅವರನ್ನು ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್ ಆಗಿ ನೇಮಿಸಲಾಗಿದೆ. ನಿವೃತ್ತ ರಾಜತಾಂತ್ರಿಕ ಅಧಿಕಾರಿ ತರಂಜಿತ್ ಸಿಂಗ್ ಸಂಧು ಅವರನ್ನು ದೆಹಲಿಯ ಲೆಫ್ಟಿನೆಂಟ್ ಗವರ್ನರ್ ಆಗಿ ನೇಮಿಸಲಾಗಿದೆ.

*********

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದಿನಿಂದ ನಾಗಾಲ್ಯಾಂಡ್, ಮಿಜೋರಾಂ ಮತ್ತು ತ್ರಿಪುರಾಗಳಿಗೆ ಮೂರು ದಿನಗಳ ಭೇಟಿಯನ್ನು ಕೈಗೊಳ್ಳುತ್ತಿದ್ದಾರೆ. ಭೇಟಿಯ ಸಮಯದಲ್ಲಿ, ಉಪರಾಷ್ಟ್ರಪತಿಗಳು ಇಂದು ನಾಗಾಲ್ಯಾಂಡ್‌ನ ಲುಮಾಮಿಯಲ್ಲಿ ನಡೆಯುವ ನಾಗಾಲ್ಯಾಂಡ್ ವಿಶ್ವವಿದ್ಯಾಲಯದ ಲನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ನಾಳೆ ಅವರು ಮಿಜೋರಾಂನ ಐಜ್ವಾಲ್‌ನಲ್ಲಿರುವ ಮಿಜೋರಾಂ ವಿಶ್ವವಿದ್ಯಾಲಯದ ೨೦ ನೇ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಬಳಿಕ ಉಪರಾಷ್ಟ್ರಪತಿಗಳು ತ್ರಿಪುರಾದ ಅಗರ್ತಲಾದಲ್ಲಿರುವ ತ್ರಿಪುರ ವಿಶ್ವವಿದ್ಯಾಲಯದ ೧೪ ನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ.

ನಂತರ, ಅವರು ಸ್ವ-ಸಹಾಯ ಗುಂಪು ಮಳಿಗೆಗಳಿಗೆ ಭೇಟಿ ನೀಡಲಿದ್ದಾರೆ ಹಾಗೂ ಹಪಾನಿಯಲ್ಲಿರುವ ಅಂತಾರಾಷ್ಟ್ರೀಯ ವ್ಯಾಪಾರ ಮತ್ತು ಮೇಳ ಕೇಂದ್ರದಲ್ಲಿ ಮಹಿಳಾ ಸ್ವ-ಸಹಾಯ ಸದಸ್ಯರು ಮತ್ತು ಲಖ್‌ಪತಿ ದೀದಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

*********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಕೃಷಿ ಮತ್ತು ಗ್ರಾಮೀಣ ಪರಿವರ್ತನೆ ಎಂಬ ವಿಷಯದ ಕುರಿತು ಬಜೆಟ್ ನಂತರದ ವೆಬಿನಾರ್ ಉದ್ದೇಶಿಸಿ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಮಾತನಾಡಲಿದ್ದಾರೆ. ಈ ವಿಷಯದ ಅಡಿಯಲ್ಲಿ, ಕೃಷಿ, ಪಶುಸಂಗೋಪನೆ ಮತ್ತು ಹೈನುಗಾರಿಕೆ, ಮೀನುಗಾರಿಕೆ ಹಾಗೂ ಗ್ರಾಮೀಣ ಜೀವನೋಪಾಯ ಎಂಬ ನಾಲ್ಕು ಪ್ರಮುಖ ವಲಯಗಳನ್ನು ಒಳಗೊಂಡ ಎಂಟು ವಿಭಿನ್ನ ವೆಬಿನಾರ್‌ಗಳನ್ನು ನಡೆಸಲಾಗುತ್ತಿದೆ. ಬಜೆಟ್ ನಂತರದ ವೆಬಿನಾರ್ ಗೋಡಂಬಿ, ತೆಂಗಿನಕಾಯಿ, ಶ್ರೀಗಂಧ, ಅಗರ್‌ವುಡ್, ಬಾದಾಮಿ, ವಾಲ್‌ನಟ್ಸ್ ಮತ್ತು ಪೈನ್ ಬೀಜಗಳಂತಹ ಬೆಳೆಗಳ ಸಾಮರ್ಥ್ಯವನ್ನು ಅನಾವರಣಗೊಳಿಸುವ ಮೂಲಕ ಹೆಚ್ಚಿನ ಮೌಲ್ಯದ ಕೃಷಿಯನ್ನು ಉತ್ತೇಜಿಸುವತ್ತ ಗಮನಹರಿಸುತ್ತದೆ. ಕೃಷಿಗಾಗಿ ಎಐ ಚಾಲಿತ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವಾದ 'ಭಾರತ್ ವಿಸ್ತಾರ್' ನೀಡುವ ಅವಕಾಶಗಳ ಬಗ್ಗೆಯೂ ಇದು ಚರ್ಚಿಸುತ್ತದೆ. ಪಶುಸಂಗೋಪನೆ ಮೌಲ್ಯ ಸರಪಳಿಯಲ್ಲಿ ಖಾಸಗಿ ವಲಯದ ಹೂಡಿಕೆ ಮತ್ತು ಉದ್ಯಮಶೀಲತೆ, ಮೀನುಗಾರಿಕೆಗಾಗಿ ಜಲಾಶಯಗಳು ಮತ್ತು ಅಮೃತ ಸರೋವರಗಳ ಸಮಗ್ರ ಅಭಿವೃದ್ಧಿ, ಕರಾವಳಿ ಮೀನುಗಾರಿಕೆ ಮೌಲ್ಯ ಸರಪಳಿಗಳನ್ನು ಬಲಪಡಿಸುವುದು ಮತ್ತು ಸ್ವಸಹಾಯ ಉದ್ಯಮಿಗಳು-ಗ್ರಾಮೀಣ ಪರಿವರ್ತನೆಗಾಗಿ ಮಾರುಕಟ್ಟೆ ಮಾರ್ಗಗಳ ಮೂಲಕ ಗ್ರಾಮೀಣ ಮಹಿಳಾ ಉದ್ಯಮಿಗಳು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಪ್ರವೇಶವನ್ನು ವಿಸ್ತರಿಸುವ ಬಗ್ಗೆಯೂ ಅಧಿವೇಶನಗಳಲ್ಲಿ ಚರ್ಚೆ ನಡೆಯಲಿದೆ.

*********

ಪೋರ್ಚುಗಲ್‌ನ ಸಂಸದೀಯ ನಿಯೋಗ, ನವದೆಹಲಿಯ ಸಂಸತ್ ಭವನದಲ್ಲಿ ರಾಜ್ಯಸಭೆಯ ಉಪ ಸಭಾಪತಿ ಹರಿವಂಶ್ ಅವರನ್ನು ಭೇಟಿ ಮಾಡಿತು. ಪೋರ್ಚುಗಲ್ ಸಂಸತ್ತಿನ ಉಪಾಧ್ಯಕ್ಷ ಮಾರ್ಕೋಸ್ ಪೆರೆಸ್ಟ್ರೆಲ್ಲೊ ಅವರು ನಿಯೋಗದ ನೇತೃತ್ವ ವಹಿಸಿದ್ದರು.

ಸಭೆಯ ಸಂದರ್ಭದಲ್ಲಿ, ಭಾರತ ಮತ್ತು ಪೋರ್ಚುಗಲ್ ನಡುವಿನ ಸಂಬಂಧಗಳು, ಸ್ನೇಹ, ಪರಸ್ಪರ ಗೌರವ, ಹಂಚಿಕೆಯ ಪ್ರಜಾಪ್ರಭುತ್ವ ಮೌಲ್ಯಗಳು, ಐತಿಹಾಸಿಕ ಮತ್ತು ಕಡಲ ಸಂಪರ್ಕಗಳು ಹಾಗೂ ಸಾಂಸ್ಕೃತಿಕ ಸಂಪರ್ಕಗಳಲ್ಲಿ ಬೇರೂರಿದೆ ಎಂದು ಹರಿವಂಶ್ ಹೇಳಿದರು. ೨೦೨೫ ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಮರುಸ್ಥಾಪನೆಯ ೫೦ ನೇ ವಾರ್ಷಿಕೋತ್ಸವವನ್ನು ಗುರುತಿಸಿದೆ. ಐರೋಪ್ಯ ಒಕ್ಕೂಟದೊಂದಿಗೆ ಭಾರತದ ಸಂಬಂಧವನ್ನು ಬಲಪಡಿಸುವಲ್ಲಿ ಪೋರ್ಚುಗಲ್ ಪಾತ್ರವನ್ನು ಅವರು ಶ್ಲಾಘಿಸಿದರು.

*********

ಜಾಗತಿಕ ದಕ್ಷಿಣ ಮುಂದಿನ ವಿಶ್ವ ಕ್ರಮವನ್ನು ನಿರ್ಧರಿಸುತ್ತದೆ ಮತ್ತು ಭಾರತ ಅದರಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ ಎಂದು ಫಿನ್‌ಲ್ಯಾಂಡ್ ಅಧ್ಯಕ್ಷ ಡಾ. ಅಲೆಕ್ಸಾಂಡರ್ ಸ್ಟಬ್ ಅಭಿಪ್ರಾಯಪಟ್ಟಿದ್ದಾರೆ. ನವದೆಹಲಿಯಲ್ಲಿ ೧೧ನೇ ರೈಸಿನಾ ಸಂವಾದ ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ಶಕ್ತಿ ಸಮತೋಲನವು ಬದಲಾಗಿದೆ ಮತ್ತು ಜಾಗತಿಕ ದಕ್ಷಿಣ, ಆರ್ಥಿಕತೆ ಹಾಗೂ ಜನಸಂಖ್ಯಾಶಾಸ್ತ್ರವನ್ನು ತನ್ನ ಬದಿಯಲ್ಲಿ ಹೊಂದಿದೆ. ಪಾಶ್ಚಿಮಾತ್ಯ ಪ್ರಾಬಲ್ಯದ ಪ್ರಪಂಚದ ಯುಗ ಮುಗಿದಿದೆ. ಆದರೆ ಇಂದು ವಿಶ್ವ ರಾಜಕೀಯದಲ್ಲಿ ಪ್ರಮುಖ ಸವಾಲುಗಳಿವೆ ಎಂದು ಹೇಳಿದರು. ಭಾರತ ಯಾವುದೇ ಭ್ರಮೆಯಲ್ಲಿಲ್ಲ ಮತ್ತು ಪ್ರಾಯೋಗಿಕ ವಿಶ್ವ ದೃಷ್ಟಿಕೋನದ ಮೇಲೆ ತನ್ನ ವಿದೇಶಾಂಗ ನೀತಿಯನ್ನು ಆಧರಿಸಿದೆ. ಭಾರತ ತನ್ನನ್ನು ತಾನು ಪ್ರತ್ಯೇಕಿಸಿಕೊಳ್ಳುವುದಿಲ್ಲ ಮತ್ತು ಅದರ ಶಕ್ತಿಯು ಸಕ್ರಿಯ ಭಾಗವಹಿಸುವಿಕೆಯ ಮೇಲೆ ಆಧಾರಿತವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತಕ್ಕೆ ಶಾಶ್ವತ ಸ್ಥಾನ ಸಿಗಬೇಕು ಎಂದು ಡಾ. ಅಲೆಕ್ಸಾಂಡರ್ ಸ್ಟಬ್ ಪ್ರತಿಪಾದಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಭಾರತೀಯರು ತೀಕ್ಷ್ಣವಾದ ಜಾಗತಿಕ ಜಾಗೃತಿಯನ್ನು ಬೆಳೆಸಿಕೊಳ್ಳುವುದನ್ನು ಮುಂದುವರಿಸಬೇಕು ಎಂದು ಕರೆ ನೀಡಿದರು.

*********

ಡಿಜಿಟಲ್ ನಾವೀನ್ಯತೆಯಲ್ಲಿ ಫಿನ್‌ಲ್ಯಾಂಡ್‌ನ ಮುಂದುವರಿದ ಸಾಮರ್ಥ್ಯಗಳು, ಭಾರತದ ಡಿಜಿಟಲ್ ರೂಪಾಂತರ ಉಪಕ್ರಮಗಳೊಂದಿಗೆ ಉತ್ತಮವಾಗಿ ಹೊಂದಿಕೆಯಾಗುತ್ತವೆ ಎಂದು ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಸಿ.ಬಿ. ಜಾರ್ಜ್ ಹೇಳಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ೫ಜಿ ಮತ್ತು ೬ಜಿ, ಕ್ವಾಂಟಮ್ ಸಂವಹನ, ಉನ್ನತ-ಕಾರ್ಯಕ್ಷಮತೆ ಮತ್ತು ಕ್ವಾಂಟಮ್ ಕಂಪ್ಯೂಟಿಂಗ್ ಹಾಗೂ ಕೃತಕ ಬುದ್ಧಿಮತ್ತೆಯಂತಹ ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಹೆಚ್ಚಿಸಲು ಡಿಜಿಟಲೀಕರಣದ ಕುರಿತು ಎರಡೂ ಕಡೆಯವರು ಅಂತರ-ವಲಯ ಜಂಟಿ ಕಾರ್ಯ ಗುಂಪನ್ನು ಸ್ಥಾಪಿಸಿದ್ದಾರೆ ಎಂದು ತಿಳಿಸಿದ್ದಾರೆ. ವಲಸೆ ಮತ್ತು ಚಲನಶೀಲತೆ ಪಾಲುದಾರಿಕೆಯ ಕುರಿತು ಎರಡೂ ಕಡೆಯವರು ಒಪ್ಪಂದಕ್ಕೆ ಸಹಿ ಹಾಕಿದ್ದಾರೆ. ವೃತ್ತಿಪರರು, ವಿದ್ಯಾರ್ಥಿಗಳು, ಉದ್ಯಮಿಗಳು, ಸಂಶೋಧಕರು ಮತ್ತು ಶಿಕ್ಷಣ ತಜ್ಞರು ಸೇರಿದಂತೆ ಪ್ರತಿಭೆಗಳ ಚಲನಶೀಲತೆಯನ್ನು ಇದು ಸುಗಮಗೊಳಿಸುವ ನಿರೀಕ್ಷೆಯಿದೆ ಎಂದು ಅವರು ಹೇಳಿದ್ದಾರೆ. ಭಾರತೀಯ ವಿದ್ಯಾರ್ಥಿಗಳಿಗೆ ಫಿನ್‌ಲ್ಯಾಂಡ್ ಇಂಟರ್ನ್‌ಶಿಪ್ ಮತ್ತು ಅಧ್ಯಯನದ ನಂತರದ ಉದ್ಯೋಗಾವಕಾಶಗಳನ್ನು ಒಳಗೊಂಡಂತೆ ವರ್ಧಿತ ಪ್ರವೇಶವನ್ನು ಒದಗಿಸುತ್ತದೆ ಎಂದು ಸಿ.ಬಿ.ಜಾರ್ಜ್ ಆಶಿಸಿದ್ದಾರೆ.

*********

ಮುಂಬೈನ ವಾಂಖೇಡೆ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಭಾರತ ೭ ರನ್‌ಗಳಿಂದ ರೋಚಕ ಗೆಲುವು ಸಾಧಿಸಿದೆ. ಈ ಮೂಲಕ ಫೈನಲ್‌ಗೆ ಲಗ್ಗೆ ಇಟ್ಟಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೫೩ ರನ್ ಕಲೆ ಹಾಕಿತು. ಭಾರತದ ಪರ ಸಂಜು ಸ್ಯಾಮ್ಸನ್ ೪೨ ಎಸೆತಗಳಲ್ಲಿ ೮೯ ರನ್ ಸಿಡಿಸಿದರು. ಉಳಿದಂತೆ ಶಿವಂ ದುಬೆ ೪೩ ರನ್, ಇಶಾನ್ ಕಿಶನ್ ೩೯ ರನ್, ಹಾರ್ದಿಕ್ ಪಾಂಡ್ಯ ೨೭ ರನ್ ಗಳಿಸಿ, ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ಗೆಲುವಿನ ಗುರಿ ಬೆನ್ನತ್ತಿದ ಇಂಗ್ಲೆಂಡ್, ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೪೬ ರನ್ ಗಳಿಸಿ, ಗೆಲುವಿನ ಸಮೀಪ ಬಂದರೂ, ಫೈನಲ್ ತಲುಪುವ ಅದರಕನಸು ನನಸಾಗಲಿಲ್ಲ. ಇಂಗ್ಲೆಂಡ್ ಪರ ಜಾಕೊಬ್ ಬೆಥೆಲ್ ೪೮ ಎಸೆತಗಳಲ್ಲಿ ೧೦೫ ರನ್ ಸಿಡಿಸಿ, ಅದ್ಭುತ ಪ್ರದರ್ಶನ ನೀಡಿದರು. ಸಂಜು ಸ್ಯಾಮ್ಸನ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಇದೇ ಭಾನುವಾರ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುವ ಫೈನಲ್ ಪಂದ್ಯದಲ್ಲಿ ಭಾರತ, ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಫೈನಲ್ ಪ್ರವೇಶಿಸಿದ ಭಾರತೀಯ ಪುರುಷರ ಕ್ರಿಕೆಟ್ ತಂಡವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಭಿನಂದಿಸಿದ್ದಾರೆ.

*********

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ, ಲಕ್ಷ್ಯ ಸೇನ್ ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ವಿಶ್ವದ ೧೨ನೇ ಶ್ರೇಯಾಂಕದ ಲಕ್ಷ್ಯ ಸೇನ್, ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಹಾಂಗ್ ಕಾಂಗ್‌ನ ಎನ್‌ಜಿ ಕಾ ಲಾಂಗ್ ಆಂಗಸ್ ಅವರನ್ನು ೨೧-೧೬, ೨೧-೨೩, ೨೧-೧೦ ಸೆಟ್‌ಗಳಿಂದ ಸೋಲಿಸಿದರು. ಲಕ್ಷ್ಯ ಸೇನ್ ಇಂದು ಕೊನೆಯ ಎಂಟರ ಹಣಾಹಣಿಯಲ್ಲಿ ಚೀನಾದ ಲಿ ಶಿ ಫೆಂಗ್ ಅವರನ್ನು ಎದುರಿಸಲಿದ್ದಾರೆ.

*********

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್‌ಇ ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಈ ತಿಂಗಳ ೨, ೫ ಮತ್ತು ೭ ರಂದು ನಿಗದಿಯಾಗಿದ್ದ ೧೦ ನೇ ತರಗತಿ ಪರೀಕ್ಷೆಯನ್ನು ರದ್ದುಗೊಳಿಸಿದೆ. ಈ ತಿಂಗಳ ೭ ರಂದು ನಿಗದಿಯಾಗಿದ್ದ ೧೨ ನೇ ತರಗತಿಯ ಪರೀಕ್ಷೆಯನ್ನು ಮುಂದಿನ ಸೂಚನೆವರೆಗೆ ಮುಂದೂಡಲಾಗಿದೆ. ಪರಿಷ್ಕೃತ ದಿನಾಂಕಗಳನ್ನು ನಂತರ ಪ್ರಕಟಿಸಲಾಗುವುದು ಎಂದು ಸಿಬಿಎಸ್‌ಇ ತಿಳಿಸಿದೆ. ಮಂಡಳಿಯು ನಾಳೆ ಪರಿಸ್ಥಿತಿಯನ್ನು ಪರಿಶೀಲಿಸಿ, ಇದೇ ೯ ರಿಂದ ನಿಗದಿಯಾಗಿರುವ ಪರೀಕ್ಷೆಗಳ ಕುರಿತು ಸೂಕ್ತ ನಿರ್ದೇಶನಗಳನ್ನು ನೀಡಲಿದೆ.

*********